**All India Radio: Bangalore**
**National Bulletin In Kannada**
**08.07.2026  7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**08.07.2026  7.35 am**

**<>><><*><><<>**

**ಮುಖ್ಯಾಂಶಗಳು**

**೧. ಭಾರತ-ಇಂಡೋನೇಷ್ಯಾ ಕಾರ್ಯತಂತ್ರದ ಪಾಲುದಾರಿಕೆಗೆ ಪ್ರಧಾನಿ ನರೇಂದ್ರ ಮೋದಿ ಕರೆ**

**೨. ಎಲ್ ನಿನೊ ಸಂಭವನೀಯ ಪರಿಣಾಮ ಕುರಿತು ಉನ್ನತ ಮಟ್ಟದ ಪರಿಶೀಲನಾ ಸಭೆ; ಸನ್ನದ್ಧತೆ ಬಲಪಡಿಸಲು ಪ್ರಧಾನಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಪಿ.ಕೆ. ಮಿಶ್ರಾ ಸೂಚನೆ**

**೩. ಭಾರತ-ಬಹ್ರೇನ್ ಸಹಕಾರ ಮತ್ತಷ್ಟು ಬಲಗೊಂಡಿದೆ- ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್**

**೪. ಫಿಫಾ ವಿಶ್ವಕಪ್ ಫುಟ್‌ಬಾಲ್; ೧೬ ರ ಸುತ್ತಿನಲ್ಲಿ ಈಜಿಪ್ಟ್ ಅನ್ನು ೩-೨ ಗೋಲುಗಳಿಂದ ಮಣಿಸಿದ ಅರ್ಜೆಂಟೀನಾ**

**<>><><*><><<>**

ಭಾರತ ಮತ್ತು ಇಂಡೋನೇಷ್ಯಾ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಇದು ಉಭಯ ರಾಷ್ಟ್ರಗಳ ಅಭಿವೃದ್ಧಿಗೆ ಮಾತ್ರವಲ್ಲ, ಪ್ರಾದೇಶಿಕ ಹಾಗೂ ಜಾಗತಿಕ ಶಾಂತಿ ಮತ್ತು ಸ್ಥಿರತೆಗೂ ಮಹತ್ವದ ಕೊಡುಗೆ ನೀಡಲಿದೆ ಎಂದು ಅವರು ಹೇಳಿದ್ದಾರೆ. ಜಕಾರ್ತಾದಲ್ಲಿ ನಿನ್ನೆ ಇಂಡೋನೇಷ್ಯಾ ಸಂಸತ್ತನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತವು ವಿಸ್ತರಣಾವಾದದ ಮಾರ್ಗವನ್ನು ಅನುಸರಿಸುವುದಿಲ್ಲ. ಅಭಿವೃದ್ಧಿಯ ಪಥವನ್ನೇ ಅನುಸರಿಸುತ್ತದೆ ಎಂದು ಹೇಳಿದರು. ಇದಕ್ಕೂ ಮುನ್ನ ಪ್ರಧಾನಿ ಮೋದಿ ಅವರು ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ಉಭಯ ದೇಶಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಉತ್ತೇಜನ ನೀಡುವ ಉದ್ದೇಶದಿಂದ ದ್ವಿಪಕ್ಷೀಯ ಸಂಬಂಧಗಳ ವಿವಿಧ ಆಯಾಮಗಳ ಕುರಿತು ನಾಯಕರು ಸಮಗ್ರವಾಗಿ ಚರ್ಚಿಸಿದರು. ಈ ಸಂದರ್ಭದಲ್ಲಿ ಪರಸ್ಪರ ಹಿತಾಸಕ್ತಿಯ ವಿವಿಧ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸುವ ಉದ್ದೇಶದ ಹಲವು ಒಡಂಬಡಿಕೆಗಳಿಗೆ ಉಭಯ ನಾಯಕರು ಸಾಕ್ಷಿಯಾದರು.

**<>><><*><><<>**

ಎಲ್ ನಿನೊದ ಸಂಭವನೀಯ ಪರಿಣಾಮ ಮತ್ತು ವಿವಿಧ ಕ್ಷೇತ್ರಗಳ ಸನ್ನದ್ಧತೆ ಕುರಿತು ಪ್ರಧಾನಮಂತ್ರಿ ಕಚೇರಿ-ಪಿಎಂಒ ನವದೆಹಲಿಯಲ್ಲಿ ನಿನ್ನೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿತು. ಪ್ರಧಾನಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಡಾ.ಪಿ.ಕೆ.ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಸೇವಾ ತೀರ್ಥದಲ್ಲಿ ನಡೆದ ಸಭೆಯಲ್ಲಿ ೧೫ಕ್ಕೂ ಹೆಚ್ಚು

ಸಚಿವಾಲಯಗಳ ಕಾರ್ಯದರ್ಶಿಗಳು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಒಟ್ಟಾರೆ ಪರಿಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸಬೇಕು. ಮುಂಗಾರು ವಿಳಂಬದಿಂದ ತೊಂದರೆಗೊಳಗಾಗಬಹುದಾದ ಜಿಲ್ಲೆಗಳ ಪರಿಸ್ಥಿತಿಯನ್ನು ರಾಜ್ಯಗಳೊಂದಿಗೆ ಸಮನ್ವಯ ಸಾಧಿಸಿ ಮೌಲ್ಯಮಾಪನ ನಡೆಸಬೇಕು. ಅಗತ್ಯವಿದ್ದಲ್ಲಿ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಡಾ.ಮಿಶ್ರಾ ಸೂಚಿಸಿದರು. ಮುಂಗಾರು ವಿಳಂಬವಾಗುವ ಜಿಲ್ಲೆಗಳಲ್ಲಿ ಜಾನುವಾರುಗಳಿಗೆ ಮೇವು ಲಭ್ಯತೆ ಖಚಿತಪಡಿಸಿಕೊಳ್ಳುವುದರ ಜೊತೆಗೆ ಮೇವು ಅಭಿವೃದ್ಧಿ ಯೋಜನೆಗಳನ್ನು ರೂಪಿಸಿ, ರಾಜ್ಯಗಳೊಂದಿಗೆ ನಿರಂತರವಾಗಿ ಮೇಲ್ವಿಚಾರಣೆ ನಡೆಸುವಂತೆ ಅವರು ನಿರ್ದೇಶನ ನೀಡಿದರು. ಕುಡಿಯುವ ನೀರಿನ ಸಮರ್ಪಕ ಲಭ್ಯತೆ ಖಚಿತಪಡಿಸುವುದಕ್ಕೂ ಆದ್ಯತೆ ನೀಡುವಂತೆ ಸೂಚಿಸಿದರು. ಜಲಾಶಯಗಳ ನೀರಿನ ಮಟ್ಟವನ್ನು ನಿರಂತರವಾಗಿ ಪರಿಶೀಲಿಸಲಾಗುತ್ತಿದ್ದು, ನೀರಿನ ಸಮರ್ಪಕ ಬಳಕೆ ಹಾಗೂ ಲಭ್ಯವಿರುವ ನೀರಿನ ಮಿತವ್ಯಯದ ಬಳಕೆಗೆ ಕ್ರಮ ಕೈಗೊಳ್ಳುವಂತೆ ಸಂಬಂಧಿತ ಇಲಾಖೆಗಳಿಗೆ ಸೂಚಿಸಲಾಗಿದೆ. ಸಭೆಯಲ್ಲಿ ಭಾರತೀಯ ಹವಾಮಾನ ಇಲಾಖೆ ಅಧಿಕಾರಿಗಳು ಜೂನ್ ಹಾಗೂ ಜುಲೈ ತಿಂಗಳಲ್ಲಿ ಇದುವರೆಗೆ ದಾಖಲಾಗಿರುವ ಮಳೆಯ ಕುರಿತು ಮಾಹಿತಿ ನೀಡಿದರು. ದೇಶದಲ್ಲಿ ಮುಂಗಾರು ವ್ಯಾಪ್ತಿ ಮತ್ತು ಎಲ್ ನಿನೊದ ಸಂಭವನೀಯ ಪರಿಣಾಮದ ಬಗ್ಗೆ ಹವಾಮಾನ ಇಲಾಖೆಯ ಮಹಾನಿರ್ದೇಶಕರು ವಿವರಿಸಿದರು. ಕೃಷಿ ಕಾರ್ಯದರ್ಶಿ, ಮುಂಗಾರು ಹಂಗಾಮಿನಲ್ಲಿ ಎಲ್ ನಿನೊದ ಸಂಭವನೀಯ ಪರಿಣಾಮ ಎದುರಿಸಲು ಕೈಗೊಂಡಿರುವ ಸಿದ್ಧತೆಗಳ ಕುರಿತು ವಿವರವಾದ ಮಾಹಿತಿ ನೀಡಿದರು. ಮಳೆ, ಜಲಾಶಯಗಳ ನೀರಿನ ಸಂಗ್ರಹ, ಬಿತ್ತನೆ ಪ್ರಗತಿ, ಕೃಷಿ ಪರಿಕರಗಳ ಲಭ್ಯತೆ, ಮಾರುಕಟ್ಟೆ ಪ್ರವೃತ್ತಿ, ಕೀಟ ಹಾಗೂ ರೋಗಬಾಧೆ ಕುರಿತಂತೆ ರಾಜ್ಯಗಳೊಂದಿಗೆ ಬೆಳೆ-ಹವಾಮಾನ ಮೇಲ್ವಿಚಾರಣಾ ಸಮಿತಿಯ ವಾರದ ಸಭೆಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಮತ್ತು ಕಿಸಾನ್ ಕ್ರೆಡಿಟ್ ಕಾರ್ಡ್ ವ್ಯಾಪ್ತಿಯನ್ನು ಹೆಚ್ಚಿಸಲು ಅಭಿಯಾನ ಆರಂಭಿಸಲಾಗಿದ್ದು, ಕೃಷಿ, ಹಣಕಾಸು ಸೇವೆಗಳು ಹಾಗೂ ಸಹಕಾರ ಇಲಾಖೆಗಳು ನಿಗದಿತ ಅವಧಿಯಲ್ಲಿ ಗರಿಷ್ಠ ವ್ಯಾಪ್ತಿ ಸಾಧಿಸುವಂತೆ ಸೂಚಿಸಲಾಗಿದೆ. ಪಶುಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆಗೆ ಒಣ ಮೇವು, ಹಸಿರು ಮೇವು ಹಾಗೂ ಜಾನುವಾರು ಆಹಾರದ ಲಭ್ಯತೆಯನ್ನು ರಾಜ್ಯ ಹಾಗೂ ಜಿಲ್ಲಾಮಟ್ಟದಲ್ಲಿ ಮೌಲ್ಯಮಾಪನ ಮಾಡುವಂತೆ ಸೂಚಿಸಲಾಗಿದೆ. ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಅಪಾಯದ ಜಿಲ್ಲೆಗಳಲ್ಲಿ ಸೂಕ್ಷ್ಮ ಮಟ್ಟದ ಯೋಜನೆ ಮತ್ತು ಮೇಲ್ವಿಚಾರಣೆಗೆ ಆದ್ಯತೆ ನೀಡುವಂತೆ ನಿರ್ದೇಶಿಸಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಅಧಿಕ ಆರ್ದ್ರತೆ ಹಾಗೂ ಡೆಂಗ್ಯೂ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಅಗತ್ಯ ಮಾರ್ಗಸೂಚಿಗಳನ್ನು ಜಾರಿಗೊಳಿಸಿದ್ದು, ಎಚ್ಚರಿಕೆ ಹಾಗೂ ಸಲಹೆಗಳನ್ನು ಗ್ರಾಮ ಮಟ್ಟದವರೆಗೆ ಪರಿಣಾಮಕಾರಿಯಾಗಿ ತಲುಪಿಸುವಂತೆ ಸೂಚಿಸಲಾಗಿದೆ. ಗ್ರಾಹಕ ವ್ಯವಹಾರಗಳ ಇಲಾಖೆ ಅಕ್ಕಿ, ಗೋಧಿ ಮತ್ತು ಬೇಳೆಕಾಳುಗಳ ದಾಸ್ತಾನು ಹಾಗೂ ಚಿಲ್ಲರೆ ಬೆಲೆಗಳ ಕುರಿತು ಮಾಹಿತಿ ನೀಡಿದೆ. ರಸಗೊಬ್ಬರ ಇಲಾಖೆಯು, ರಸಗೊಬ್ಬರಗಳ ಸಮರ್ಪಕ ಲಭ್ಯತೆ ಮತ್ತು ಮುಂಬರುವ ರಬಿ ಹಂಗಾಮಿನ ಆರಂಭಿಕ ದಾಸ್ತಾನು ಕುರಿತು ವಿವರಿಸಿದೆ. ಅಗತ್ಯ ವಸ್ತುಗಳು ಮತ್ತು ರಸಗೊಬ್ಬರಗಳ ಲಭ್ಯತೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುವಂತೆ ಸೂಚಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಇಲಾಖೆಯು, ವಿಕಸಿತ ಭಾರತ ಉದ್ಯೋಗ ಮತ್ತು ಜೀವನೋಪಾಯ ಖಾತರಿ ಅಭಿಯಾನದಡಿ ಜುಲೈ ೧ರಿಂದ ಆರಂಭಿಸಿರುವ ಕಾಮಗಾರಿಗಳ ಮೂಲಕ ಇದುವರೆಗೆ ಒಂದು ಕೋಟಿ ಮಾನವ ದಿನಗಳ ಉದ್ಯೋಗ ಸೃಷ್ಟಿಸಿರುವುದಾಗಿ ತಿಳಿಸಿತು. ವಿದ್ಯುತ್ ಇಲಾಖೆಯು ವಿದ್ಯುತ್ ಉತ್ಪಾದನೆ ಮತ್ತು ಲಭ್ಯತೆಯ ಸ್ಥಿತಿಗತಿಗಳನ್ನು ಸಭೆಗೆ ವಿವರಿಸಿತು.

<>><><*><><<>

ಭಾರತ ಮತ್ತು ಬಹ್ರೇನ್ ನಡುವಿನ ಸಹಕಾರ ನಿರಂತರವಾಗಿ ಮತ್ತಷ್ಟು ಗಾಢವಾಗುತ್ತಿದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಬಹ್ರೇನ್‌ನ ಎರಡು ದಿನಗಳ ಅಧಿಕೃತ ಪ್ರವಾಸವನ್ನು ನಿನ್ನೆ ಪೂರ್ಣಗೊಳಿಸಿದ ಡಾ.ಜೈಶಂಕರ್, ಬಹ್ರೇನ್ ರಾಜ ಹಮದ್ ಬಿನ್ ಇಸಾ ಅಲ್ ಖಲೀಫಾ ಅವರನ್ನು ಯುವರಾಜ ಹಾಗೂ ಪ್ರಧಾನಮಂತ್ರಿ ಸಲ್ಮಾನ್ ಬಿನ್ ಹಮದ್ ಅಲ್ ಖಲೀಫಾ ಅವರ ಉಪಸ್ಥಿತಿಯಲ್ಲಿ ಭೇಟಿ ಮಾಡಿದರು. ಬಳಿಕ ಉಪಪ್ರಧಾನಮಂತ್ರಿ ಶೇಖ್ ಖಾಲಿದ್ ಬಿನ್ ಅಬ್ದುಲ್ಲಾ ಅಲ್ ಖಲೀಫಾ ಅವರೊಂದಿಗೂ ಪ್ರತ್ಯೇಕವಾಗಿ ಮಾತುಕತೆ ನಡೆಸಿದರು. ಈ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ಶುಭಾಶಯಗಳನ್ನು ಬಹ್ರೇನ್ ನಾಯಕತ್ವಕ್ಕೆ ತಿಳಿಸಿದ ಡಾ.ಜೈಶಂಕರ್, ಉಭಯ ದೇಶಗಳ ದೀರ್ಘಕಾಲದ ಸ್ನೇಹಪರ ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು. ಬಹ್ರೇನ್‌ನಲ್ಲಿ ನೆಲೆಸಿರುವ ಭಾರತೀಯ ಸಮುದಾಯದ ಸುರಕ್ಷತೆ, ಭದ್ರತೆ ಮತ್ತು ಯೋಗಕ್ಷೇಮವನ್ನು ಖಾತ್ರಿಪಡಿಸಿರುವುದಕ್ಕಾಗಿ ಬಹ್ರೇನ್ ನಾಯಕತ್ವಕ್ಕೆ ಅವರು ಕೃತಜ್ಞತೆ ಸಲ್ಲಿಸಿದರು. ಡಾ. ಜೈಶಂಕರ್ ಅವರು ಬಹ್ರೇನ್ ವಿದೇಶಾಂಗ ಸಚಿವ ಡಾ.ಅಬ್ದುಲ್ಲತೀಫ್ ಬಿನ್ ರಶೀದ್ ಅಲ್ ಝಯಾನಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಉಭಯ ಸಚಿವರು, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಬೆಳವಣಿಗೆಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಭಾರತ-ಬಹ್ರೇನ್ ದ್ವಿಪಕ್ಷೀಯ ಸಂಬಂಧಗಳ ಪರಿಶೀಲನೆ ನಡೆಸಿದ ಅವರು, ವಿವಿಧ ಕ್ಷೇತ್ರಗಳಲ್ಲಿ ಸಹಕಾರವನ್ನು ಇನ್ನಷ್ಟು ವಿಸ್ತರಿಸುವ ಸಾಧ್ಯತೆಗಳ ಕುರಿತು ಚರ್ಚಿಸಿದರು. ೨೦೨೬-೨೭ನೇ ಸಾಲಿಗೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ತಾತ್ಕಾಲಿಕ ಸದಸ್ಯರಾಗಿ ಆಯ್ಕೆಯಾಗಿರುವ ಬಹ್ರೇನ್‌ಗೆ ಡಾ. ಜೈಶಂಕರ್ ಅಭಿನಂದನೆ ಸಲ್ಲಿಸಿದರು. ಡಾ. ಎಸ್. ಜೈಶಂಕರ್ ಅವರು ಪ್ರಸ್ತುತ ಕತಾರ್, ಬಹ್ರೇನ್, ಕುವೈತ್, ಒಮಾನ್, ನ್ಯೂಯಾರ್ಕ್ ಹಾಗೂ ಬ್ರಸೆಲ್ಸ್‌ಗಳಿಗೆ ಒಳಗೊಂಡ ೧೧ ದಿನಗಳ ವಿದೇಶ ಪ್ರವಾಸದಲ್ಲಿದ್ದಾರೆ.

<>><><*><><<>

ಕಳೆದ ಜೂನ್ ೨೪ರಂದು ವೆನೆಜುವೆಲಾದಲ್ಲಿ ಸಂಭವಿಸಿದ ಅವಳಿ ಭೂಕಂಪಗಳಲ್ಲಿ ಮೃತಪಟ್ಟವರ ಸಂಖ್ಯೆ ೩ ಸಾವಿರದ ೬೮೫ಕ್ಕೆ ಏರಿಕೆಯಾಗಿದೆ. ೭.೨ ಮತ್ತು ೭.೫ ತೀವ್ರತೆಯ ಈ ಭೂಕಂಪಗಳು ಕಳೆದ ನೂರು ವರ್ಷಗಳಲ್ಲಿ ವೆನೆಜುವೆಲಾಕ್ಕೆ ಅಪ್ಪಳಿಸಿದ ಅತ್ಯಂತ ಪ್ರಬಲ ಭೂಕಂಪಗಳಾಗಿವೆ. ಇತ್ತೀಚಿನ ದಿನಗಳಲ್ಲಿ ಸಾವಿನ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದ್ದು, ಸುಮಾರು ೧೬ ಸಾವಿರ ೭೪೦ ಮಂದಿ ಗಾಯಗೊಂಡಿದ್ದಾರೆ ಎಂದು ಅಂದಾಜಿಸಲಾಗಿದೆ. ಭೂಕಂಪದಿಂದ ರಾಜಧಾನಿ ಕಾರಕಾಸ್ ಸಮೀಪದ ಸಿಮೋನ್ ಬೊಲಿವರ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹಾನಿಯಾಗಿದ್ದು, ವಿಮಾನ ಸಂಚಾರಕ್ಕೆ ಅಡಚಣೆ ಉಂಟಾಗಿದೆ. ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೋಡ್ರಿಗಸ್ ಅವರು, ಪರ್ಯಾಯ ರನ್‌ವೇ ಬಳಸಿ ಸಾಧ್ಯವಾದಷ್ಟು ಬೇಗ ವಾಣಿಜ್ಯ ವಿಮಾನ ಸಂಚಾರವನ್ನು ಪುನರಾರಂಭಿಸಲಾಗುವುದು ಎಂದು ತಿಳಿಸಿದ್ದಾರೆ.

<>><><*><><<>

ವ್ಯಾಂಕೋವರ್‌ನಲ್ಲಿ ನಿನ್ನೆ ನಡೆದ ಫಿಫಾ ವಿಶ್ವಕಪ್ ನ ಫುಟ್ಬಾಲ್‌ನಲ್ಲಿ, ೧೬ ರ ಸುತ್ತಿನ ಪಂದ್ಯದಲ್ಲಿ ಸ್ವಿಟ್ಜರ್ಲೆಂಡ್ ತಂಡವು ಪೆನಾಲ್ಟಿ ಶೂಟೌಟ್‌ನಲ್ಲಿ ಕೊಲಂಬಿಯಾವನ್ನು ೪-೩ ಗೋಲುಗಳಿಂದ ಸೋಲಿಸಿತು. ಮತ್ತು ಫಿಫಾ

ವಿಶ್ವಕಪ್‌ನಲ್ಲಿ ಸ್ವಿಟ್ಜರ್ಲೆಂಡ್ ತಂಡವು ಕ್ವಾರ್ಟರ್ ಫೈನಲ್‌ಗೆ ತಲುಪಿದ್ದು ಇದೇ ಮೊದಲಾಗಿದೆ. ಅಟ್ಲಾಂಟಾದಲ್ಲಿ ನಡೆದ ೧೬ ರ ಸುತ್ತಿನ ಮತ್ತೊಂದು ಪಂದ್ಯದಲ್ಲಿ, ಅರ್ಜೆಂಟೀನಾ ತಂಡವು ಈಜಿಪ್ಟ್ ಅನ್ನು ೩-೨ ಗೋಲುಗಳಿಂದ ಸೋಲಿಸಿತು. ಈ ಗೆಲುವಿನೊಂದಿಗೆ ಅರ್ಜೆಂಟೀನಾ ಪಂದ್ಯಾವಳಿಯಲ್ಲಿ ಕ್ವಾರ್ಟರ್ ಫೈನಲ್‌ಗೆ ಪ್ರವೇಶಿಸಿತು.

**<>><><*><><<>**

ನಾಟಿಂಗ್‌ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್‌ನಲ್ಲಿ ನಿನ್ನೆ ರಾತ್ರಿ ನಡೆದ ಪುರುಷರ ಕ್ರಿಕೆಟ್‌ನ ೩ನೇ ಟಿ-೨೦ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಭಾರತವನ್ನು ೧೨೫ ರನ್‌ಗಳಿಂದ ಸೋಲಿಸಿತು. ಟಾಸ್ ಸೋತು ಮೊದಲು ಬ್ಯಾಟಿಂಗ್‌ಗೆ ಇಳಿದ ಇಂಗ್ಲೆಂಡ್ ತಂಡವು ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್‌ಗಳಿಗೆ ೨೦೧ ರನ್ ಗಳಿಸಿತು. ಭಾರತ ಪರ ಪ್ರಿನ್ಸ್ ಯಾದವ್ ಮತ್ತು ಹರ್ಷಿತ್ ರಾಣಾ ತಲಾ ೨ ವಿಕೆಟ್‌ಗಳನ್ನು ಪಡೆದರು. ೨೦೨ ರನ್‌ಗಳ ಗುರಿಯನ್ನು ಬೆನ್ನತ್ತಿದ ಭಾರತ ತಂಡವು ೧೧.೪ ಓವರ್‌ಗಳಲ್ಲಿ ೭೬ ರನ್‌ಗಳಿಗೆ ಆಲೌಟ್ ಆಯಿತು. ಮೊದಲ ಟಿ೨೦ ಪಂದ್ಯ ಮಳೆಯಿಂದಾಗಿ ಯಾವುದೇ ಫಲಿತಾಂಶವಿಲ್ಲದೆ ಕೊನೆಗೊಂಡಿತು. ಸರಣಿಯ ಕೊನೆಯ ಎರಡು ಪಂದ್ಯಗಳನ್ನು ಬ್ರಿಸ್ಟಲ್ ಮತ್ತು ಸೌತಾಂಪ್ಟನ್ ಆಯೋಜಿಸಲಿವೆ. ಟಿ-೨೦ ಸರಣಿಯ ನಂತರ, ಭಾರತವು ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಇಂಗ್ಲೆಂಡ್ ವಿರುದ್ಧ ಸೆಣಸಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**